**<u>ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ</u>**

**<u>ಸಿ.ಸಿ.ನಂಃ 1235/2023</u>**

**<u>ಫಿರ್ಯಾದುದಾರರುಃ</u>** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

-: **ವಿರುದ್ಧ** :-

**<u>ಆರೋಪಿಗಳು :</u>**

1. ಶ್ರೀ ಹೆಚ್.ಎ.ಜಯಣ್ಣ,
ಬಿನ್ ಶ್ರೀ ಅಂಜನಪ್ಪ,
49 ವರ್ಷಗಳು,

2. ಶ್ರೀ ಮನೋಜ್ ಕುಮಾರ್
ಯಾನೆ ಮನು,
ಬಿನ್ ಶ್ರೀ ದೇವೇಂದ್ರಪ್ಪ,
29 ವರ್ಷ,

ಇಬ್ಬರ ವಾಸಃ ದೊಡ್ಡಟ್ಯಾಂಕ್ ಬೀದಿ,
ಹುಣಸಘಟ್ಟ ಗ್ರಾಮ,
ಅಮೃತಾಪುರ ಹೋಬಳಿ,
ತರೀಕೆರೆ ತಾಲ್ಲೂಕು.

**<u>ದೋಷಾರೋಪಣೆ</u>**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 07.12.2022 ರಂದು ಮಧ್ಯಾಹ್ನ 3.00 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಹುಣಸಘಟ್ಟ ಗ್ರಾಮದಲ್ಲಿ ಚಾಸಾ-1/ಶ್ರೀಮತಿ ತಿಪ್ಪಮ್ಮ ರವರು ಹುಣಸಘಟ್ಟ ಗ್ರಾಮದ ಅ.ಸ.ನಂ.545 ರ ತಮ್ಮ ಮನೆಯ ಬಳಿ ನಿಂತಿದ್ದಾಗ 1 ಮತ್ತು 2 ನೇ ಆರೋಪಿತರಾದ ನೀವು ಚಾಸಾ-1 ರವರ ಮನೆಯ ಪಕ್ಕದಲ್ಲಿ ಹೊಸ ಮನೆಯನ್ನು ಕಟ್ಟುವ ಕೆಲಸ ಮಾಡುತ್ತಿರುವಾಗ ಚಾಸಾ-1 ರವರು ತಮ್ಮ ಮನೆಯ ಗೋಡೆಯು ಬೀಳುತ್ತಿರುತ್ತದೆ ಯಾವಾಗ ಸರಿಮಾಡಿಕೊಡುತ್ತೀರ ಎಂದು ಕೇಳಿದ್ದಕ್ಕೆ ಹಾಗೂ ಗೋಡೆಯ ವಿಚಾರವಾಗಿ ದ್ವೇಷವನ್ನು ಇಟ್ಟುಕೊಂಡು 1 ಮತ್ತು 2 ನೇ ಆರೋಪಿತರಾದ ನೀವು ಅಪರಾಧವನ್ನು ಮಾಡುವ ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ಸೂಳೆಮುಂಡೆ, ಬೋಳಿಮುಂಡೆ ಎಂದು ಚಾಸಾ-1 ರವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ

1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 2 ನೇ ಆರೋಪಿ ಚಾಸಾ-1 ರವರನ್ನು ಕೈಯಿಂದ ತಳ್ಳಿ ಕೆಳಕ್ಕೆ ಬೀಳಿಸಿ ಅವರ ಪಕ್ಕೆಲುಬಿಗೆ ನೋವಾಗಿರುತ್ತದೆ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ಮತ್ತು 2 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 2 ನೇ ಆರೋಪಿ ಚಾಸಾ-1 ರವರ ಮಾನಹಾನಿ ಮಾಡುವ ಉದ್ದೇಶದಿಂದ ಬಲದೇ ಕಾಲಿನಿಂದ ತುಳಿದ ಮಾನಕ್ಕೆ ಭಂಗ ಬರುವಂತೆ ಮಾಡಿರುತ್ತೀರಿ. ಈ ರೀತ್ಯ 1 ಮತ್ತು 2 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ಮತ್ತು 2 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?
ಆರೋಪಿಗಳ ಉತ್ತರಃ
ಆರೋಪಿ 1: Pleaded not guilty and claimed to be tried
ಆರೋಪಿ 2: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 15.02.2025

ಸಹಿ/-
(ರಾಹುಲ್ ಶೆಟ್ಟಿಗಾರ್)
ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾದಂ., ತರೀಕೆರೆ.

ಆರೋಪಿತರ ಸಹಿಃ